# All India Radio: Bangalore
# National Bulletin In Kannada
# 03.02.2026 1935 hrs

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 03.02.2026 1935 hrs

*****************

**ಮುಖ್ಯಾಂಶಗಳು**

1. **ದೇಶದ ರಾಷ್ಟ್ರೀಯ ಹಿತಾಸಕ್ತಿಗೆ ಒತ್ತು ನೀಡುವ ಭಾರತ–ಅಮೆರಿಕಾ ಐತಿಹಾಸಿಕ ವ್ಯಾಪಾರ ಒಪ್ಪಂದ**
2. **ಸದನದಲ್ಲಿ ಅಶಿಸ್ತಿನ ವರ್ತನೆ: ಲೋಕಸಭೆಯಲ್ಲಿಂದು ವಿರೋಧ ಪಕ್ಷದ ಎಂಟು ಸಂಸದರ ಅಮಾನತು**
3. **ಇಂಧನ ಕ್ಷೇತ್ರದಲ್ಲಿ ಸಹಕಾರ ಬಲವರ್ಧನೆಗೆ ಭಾರತ–ಭೂತಾನ್ ದ್ವಿಪಕ್ಷೀಯ ಮಾತುಕತೆ**
4. **ಐಸಿಸಿ 19 ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್: ಮೊದಲ ಸೆಮಿಫೈನಲ್ಸ್‌ನಲ್ಲಿಂದು ಆಸ್ಟ್ರೇಲಿಯಾಗೆ 278 ರನ್‌ಗಳ ಗುರಿ ನೀಡಿದ ಇಂಗ್ಲೆಂಡ್**

*****************

ಭಾರತ–ಅಮೆರಿಕ ವ್ಯಾಪಾರ ಒಪ್ಪಂದವು ಭಾರತದ ರಾಷ್ಟ್ರೀಯ ಹಿತಾಸಕ್ತಿಗೆ ನೀಡುವ ಕೇಂದ್ರದಲ್ಲಿರಿಸುವ ಐತಿಹಾಸಿಕ ಮತ್ತು ಭವಿಷ್ಯತ್ತಿನ ವ್ಯಾಪಾರ ಒಪ್ಪಂದವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ವ್ಯಾಪಾರ ಒಪ್ಪಂದವು ಜಾಗತಿಕ ಆರ್ಥಿಕತೆಯಲ್ಲಿ ದೇಶದ ಸ್ಥಾನವನ್ನು ಬಲಪಡಿಸುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪರಸ್ಪರ ಸುಂಕಗಳಂತಹ ಸವಾಲುಗಳ ಹೊರತಾಗಿಯೂ ಭಾರತ ನ್ಯಾಯಯುತ ಮತ್ತು ಸಮತೋಲಿತ ಮಾರುಕಟ್ಟೆ ಪ್ರವೇಶ ಖಚಿತಪಡಿಸಿಕೊಳ್ಳುವುದರ ಜೊತೆಗೆ ತನ್ನ ಪ್ರಮುಖ ಹಿತಾಸಕ್ತಿಗಳನ್ನು ಯಶಸ್ವಿಯಾಗಿ ರಕ್ಷಿಸಿಕೊಂಡಿದೆ ಎಂದು ತಿಳಿಸಿದರು.

ಈ ಒಪ್ಪಂದವು ದೇಶದ ಗ್ರಾಮೀಣ ಮತ್ತು ನಗರ ಪ್ರದೇಶಾದ್ಯಂತ ರೈತರು, ಮೀನುಗಾರರು, ಎಂಎಸ್‌ಎಂಇಗಳು, ಮಹಿಳಾ ಉದ್ಯಾಮಿಗಳು ಮತ್ತು ಯುವಕರಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಸಚಿವ ಪಿಯೂಶ್ ಗೋಯಲ್ ಹೇಳಿದರು.

*****************

ಅಮೆರಿಕಾ ಜೊತೆಗಿನ ಭಾರತದ ಐತಿಹಾಸಿಕ ವ್ಯಾಪಾರ ಒಪ್ಪಂದವು ನಿರಂತರ ತಾಳ್ಮೆಯ ಫಲಿತಾಂಶ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಎನ್‌ಡಿಎ ಸಂಸದೀಯ ಪಕ್ಷದ ಸಭೆಯಲ್ಲಿ ಸಂಸದರನ್ನು ಉದ್ದೇಶಿಸಿ ಮಾತನಾಡಿದ ಅವರು, ವ್ಯಾಪಾರ ಒಪ್ಪಂದವು ಆರ್ಥಿಕ ವಾತಾವರಣವನ್ನು ಸೃಷ್ಟಿಸಿದೆ ಮತ್ತು ಜಾಗತಿಕ ವ್ಯಾಪಾರ ಮಾತುಕತೆಗಳಿಗೆ ಸ್ಥಿರ ಹಾಗೂ ಮೌಲ್ಯಯುತ ವಿಧಾನವನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು.

ವಿರೋಧ ಪಕ್ಷಗಳು ಅಮೆರಿಕಾ ವಿಧಿಸಿದ ಸುಂಕಗಳ ಕುರಿತು ಟೀಕಿಸಿದ್ದವು. ಆದರೆ, ಸರ್ಕಾರ ತಾಳ್ಮೆಯಿಂದ ಇತ್ತು. ಇದೀಗ ಅದರ ಫಲಿತಾಂಶಗಳು ಗೋಚರಿಸುತ್ತಿವೆ. ವಿಶ್ವದ ಕ್ರಮವು ಬದಲಾಗುತ್ತಿದೆ, ಅದರ ಪಥವು ಭಾರತದ ಕಡೆಗೆ ಹೆಚ್ಚು ವಾಲುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇದೇ ವೇಳೆ, ಎನ್‌ಡಿಎ ಸಂಸದರು ಭಾರತ–ಅಮೆರಿಕಾ ವ್ಯಾಪಾರ ಒಪ್ಪಂದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಿದರು.

ಸಭೆಯಲ್ಲಿ ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಜೆ.ಪಿ.ನಡ್ಡಾ, ಅಶ್ವಿನಿ ವೈಷ್ಣವ್ ಸೇರಿದಂತೆ ಎನ್‌ಡಿಎ ಮಿತ್ರ ಪಕ್ಷಗಳ ಸಂಸದರು ಉಪಸ್ಥಿತರಿದ್ದರು.

*****************

ಭಾರತ–ಅಮೆರಿಕಾ ವ್ಯಾಪಾರ ಒಪ್ಪಂದವನ್ನು ಶ್ಲಾಘಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದು ದೇಶದ ತಂತ್ರಜ್ಞಾನ ಆಧಾರಿತ ಬೆಳವಣಿಗೆಗೆ ಪ್ರಮುಖ ಉತ್ತೇಜನವಾಗಿದೆ ಎಂದು ಹೇಳಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಅವರು, ಭಾರತದ ಸಾಫ್ಟ್‌ವೇರ್ ಮತ್ತು ಸೇವಾ ವಲಯಗಳ ಶಕ್ತಿಯನ್ನು ಬಳಸಿಕೊಳ್ಳುವ ಮೂಲಕ ಭಾರತ–ಅಮೆರಿಕಾ ವ್ಯಾಪಾರ ಒಪ್ಪಂದವು ದೇಶವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದರು.

*****************

ಪಿಎಂ ಕಿಸಾನ್ ಯೋಜನೆಯಡಿ ಕೇಂದ್ರ ಸರ್ಕಾರ 21 ಕಂತುಗಳಲ್ಲಿ ನಾಲ್ಕು ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೊತ್ತವನ್ನು ರೈತರಿಗೆ ವಿತರಿಸಿದೆ ಎಂದು ಕೇಂದ್ರ ಕೃಷಿ ಖಾತೆ ರಾಜ್ಯ ಸಚಿವ ರಾಮನಾಥ್ ಠಾಕೂರ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೋಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಕೃಷಿ ಯೋಗ್ಯ ಭೂಮಿಯನ್ನು ಹೊಂದಿರುವ ರೈತರ ಆರ್ಥಿಕ ಅಗತ್ಯಗಳನ್ನು ಪೂರೈಸಲು 2019ರಲ್ಲಿ ಪಿಎಂ ಕಿಸಾನ್ ಯೋಜನೆಯನ್ನು ಪ್ರಾರಂಭಿಸಲಾಯಿತು.

ಈ ಯೋಜನೆಯಡಿ ವರ್ಷಕ್ಕೆ 6 ಸಾವಿರ ರೂಪಾಯಿಗಳ ಆರ್ಥಿಕ ಪ್ರಯೋಜನವನ್ನು ನೇರ ನಗದು ವರ್ಗಾವಣೆ ವಿಧಾನದ ಮೂಲಕ ರೈತರ ಖಾತೆಗಳಿಗೆ ಮೂರು ಸಮಾನ ಕಂತುಗಳಲ್ಲಿ ವರ್ಗಾಯಿಸಲಾಗುತ್ತಿದೆ ಎಂದು ಹೇಳಿದರು.

*****************

ನಶೆ ಮುಕ್ತ ಭಾರತ ಅಭಿಯಾನವು 25 ಕೋಟಿಗೂ ಹೆಚ್ಚು ಜನರನ್ನು ತಲುಪಿದ್ದು, ಯುವಜನರಲ್ಲಿ ಮಾದಕ ವ್ಯಸನದ ಬಗ್ಗೆ ಜಾಗೃತಿ ಮೂಡಿಸಲು ಸಹಾಯ ಮಾಡಿದೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ವಿರೇಂದ್ರ ಕುಮಾರ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಯುವಜನರಲ್ಲಿ ಹೆಚ್ಚುತ್ತಿರುವ ಮಾದಕ ವ್ಯಸನದ ಬಗ್ಗೆ ಜಾಗೃತಿ ಮೂಡಿಸಲು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ವಿವಿಧ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಹೇಳಿದರು.

ವ್ಯಸನದಿಂದ ಮುಕ್ತರಾಗಲು ಸಹಾಯ ಬಯಸುವ ವ್ಯಕ್ತಿಗಳಿಗೆ ಪ್ರಾಥಮಿಕ ಸಮಾಲೋಚನೆ ಮತ್ತು ತಕ್ಷಣದ ಸೇವೆಗಳನ್ನು ಒದಗಿಸಲು ಸಚಿವಾಲಯವು ಟೋಲ್ ಫ್ರೀ ಸಹಾಯವಾಣಿ 14446 ಅನ್ನು ಆರಂಭಿಸಿದೆ ಎಂದು ಸಚಿವ ವಿರೇಂದ್ರ ಕುಮಾರ್ ಮಾಹಿತಿ ನೀಡಿದರು.

*****************

ಸದನದಲ್ಲಿ ಅಶಿಸ್ತಿನ ವರ್ತನೆಗಾಗಿ ಲೋಕಸಭೆಯಲ್ಲಿಂದು ವಿರೋಧ ಪಕ್ಷದ 8 ಸಂಸದರನ್ನು ಬಜೆಟ್ ಅಧಿವೇಶನದ ಉಳಿದ ಅವಧಿವರೆಗೆ ಅಮಾನತುಗೊಳಿಸಲಾಗಿದೆ.

ಕಾಂಗ್ರೆಸ್‌ನ ಮಾಣಿಕ್ಯಮ್ ಠಾಗೂರ್, ಅಮರಿಂದರ್ ಸಿಂಗ್ ರಾಜಾ, ಗುರ್ಜಿತ್ ಸಿಂಗ್, ಹಿಬಿ ಈಡನ್, ಡೀನ್ ಕುರಿಯಾಕೋಸ್, ಪ್ರಶಾತ್ ಪಡೋಲೊ ಮತ್ತು ಕಿರಣ್ ಕುಮಾರ್ ರೆಡ್ಡಿ ಹಾಗೂ ಸಿಪಿಎಂನ ಎಸ್.ವೆಂಕಟೇಶನ್ ಅಮಾನತುಗೊಂಡ ಸಂಸದರಾಗಿದ್ದಾರೆ.

ಮೂರನೇ ಮುಂದೂಡಿಕೆಯ ನಂತರ ಇಂದು ಮಧ್ಯಾಹ್ನ ಸದನ ಸೇರಿದಾಗ ವಿರೋಧ ಪಕ್ಷದ ಸಂಸದರು ವಿವಿಧ ವಿಷಯಗಳ ಕುರಿತು ಪ್ರತಿಭಟನೆ ನಡೆಸಲು ಪ್ರಾರಂಭಿಸಿದರು. ಈ ವೇಳೆ, ಲೋಕಸಭಾಧ್ಯಕ್ಷರ ಆಸನದ ಕಡೆಗೆ ಕಾಗದಗಳನ್ನು ಎಸೆದು ಅಶಿಸ್ತಿನ ವರ್ತನೆ ತೋರಿದ್ದಕ್ಕೆ ಲೋಕಸಭಾಧ್ಯಕ್ಷರು ಆಕ್ಷೇಪ ವ್ಯಕ್ತಪಡಿಸಿದರು.

ನಂತರ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಲೋಕಸಭೆಯಲ್ಲಿ ಅಶಿಸ್ತಿನ ವರ್ತನೆಗಾಗಿ ಕಾಂಗ್ರೆಸ್‌ನ ಏಳು ಸಂಸದರು ಹಾಗೂ ಸಿಪಿಎಂನ ಒಬ್ಬರು ಸಂಸದರು ಸೇರಿ ಒಟ್ಟು 8 ಸಂಸದರನ್ನು ಬಜೆಟ್ ಅಧಿವೇಶನದ ಉಳಿದ ಅವಧಿಯವರೆಗೆ ಅಮಾನತುಗೊಳಿಸುವಂತೆ ಕೋರಿ ನಿರ್ಣಯ ಮಂಡಿಸಿದರು.

ಸದನವು ಧ್ವನಿಮತದೊಂದಿಗೆ ನಿರ್ಣಯವನ್ನು ಅಂಗೀಕರಿಸಿತು. ಬಳಿಕ ಸಭಾಧ್ಯಕ್ಷರು ನಾಳೆ ಬೆಳಗ್ಗೆ 11 ಗಂಟೆಗೆ ಸದನವನ್ನು ಮುಂದೂಡಿದರು.

*****************

ರಾಜ್ಯಸಭೆಯಲ್ಲಿಂದು ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಯನ್ನು ಮುಂದುವರಿಸಲಾಯಿತು.

ಚರ್ಚೆಯಲ್ಲಿ ಭಾಗವಹಿಸಿದ ರಾಜ್ಯಸಭಾ ಸದಸ್ಯ ಘನಶಾಮ್ ತಿವಾರಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ. 25 ಕೋಟಿ ಜನರನ್ನು ಬಡತನದಿಂದ ಹೊರತರಲಾಗಿದೆ ಮತ್ತು 95 ಕೋಟಿ ಜನರನ್ನು ಸಾಮಾಜಿಕ ಭದ್ರತೆಯ ವ್ಯಾಪ್ತಿಗೆ ತರಲಾಗಿದೆ ಎಂದು ಹೇಳಿದರು.

ವೈ.ಎಸ್.ಆರ್.ಸಿ.ಪಿ ಸಂಸದ ಗೊಲ್ಲ ಬಾಬುರಾವ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶವು ವಿಶ್ವದ ನಾಲ್ಕನೇ ಅತಿ ದೊಡ್ಡ ಆರ್ಥಿಕತೆಯಾಗಿದೆ. ಬಡವರಿಗಾಗಿ 5 ಕೋಟಿ ಪಕ್ಕಾ ಮನೆಗಳನ್ನು ನಿರ್ಮಿಸಲಾಗಿದೆ. 12 ಕೋಟಿ ಜನರಿಗೆ ನಲ್ಲಿ ನೀರಿನ ಸಂಪರ್ಕವನ್ನು ಒದಗಿಸಲಾಗಿದೆ ಎಂದು ತಿಳಿಸಿದರು.

ಇದೇ ವೇಳೆ, ನ್ಯಾಷನಲ್ ಕಾನ್ಫರೆನ್ಸ್ ಸಂಸದ ಜಿ.ಎಸ್.ಒಬೆರಾಯ್ ಮಾತನಾಡಿ, ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ ನೀಡುವಂತೆ ಒತ್ತಾಯಿಸಿದರು.

*****************

ಭೂತಾನ್‌ನ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲ ಸಚಿವ ಲಿಯಾನ್ ಪೊ ಜೆಮ್ ಶೆರಿಂಗ್ ನವದೆಹಲಿಯಲ್ಲಿ ಇಂದು ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಮತ್ತು ಕೇಂದ್ರ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ಯಸ್ಸೊ ನಾಯಕ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ವಿದ್ಯುತ್ ಕ್ಷೇತ್ರದಲ್ಲಿ ಉಭಯ ರಾಷ್ಟ್ರಗಳ ನಡುವಿನ ದೀರ್ಘಕಾಲದ ಸಹಕಾರವನ್ನು ಬಲಪಡಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಪುನತ್‌ಸಂಗ್ ಚು–1 ಜಲ ವಿದ್ಯುತ್ ಯೋಜನೆಯ ಆರಂಭಿಕ ಕಾರ್ಯವಿಧಾನದ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು. ಅಲ್ಲದೇ, ಸಂಕೋಶ್ ಜಲ ವಿದ್ಯುತ್ ಯೋಜನೆ, ಭಾರತ ಮತ್ತು ಭೂತಾನ್ 2040ನೇ ಇಸವಿ ವರೆಗಿನ ಪ್ರಸರಣ ಮೂಲಸೌಕರ್ಯ ಯೋಜನೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಮಾಲೋಚನೆ ನಡೆಸಲಾಯಿತು.

*****************

ಜಿಂಬಾಬ್ವೆಯ ಬುಲಾವಾಯೊದ ಕ್ವೀನ್ಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ 19 ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಮೊದಲ ಸೆಮಿಫೈನಲ್ಸ್ ಪಂದ್ಯದಲ್ಲಿಂದು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್, ನಿಗದಿತ 50 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 277 ರನ್ ಮಾಡಿದೆ.

ಗೆಲುವಿನ ಗುರಿ ಬೆನ್ನತ್ತಿರುವ ಆಸ್ಟ್ರೇಲಿಯಾ ಇತ್ತೀಚಿನ ವರದಿ ಬಂದಾಗ 35 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 161 ರನ್ ಮಾಡಿ ಆಡುತ್ತಿದೆ.

ನಾಳೆ ನಡೆಯುವ ಎರಡನೇ ಸೆಮಿಫೈನಲ್ಸ್ ಪಂದ್ಯದಲ್ಲಿ ಭಾರತ ಮತ್ತು ಅಫ್ಘಾನಿಸ್ತಾನ ತಂಡಗಳು ಸೆಣಸಾಟ ನಡೆಸಲಿವೆ.

*****************

ವಡೋದರಾದ ಕೋಟಂಬಿಯಲ್ಲಿರುವ ಬಿಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್–ಡಬ್ಲ್ಯೂಪಿಎಲ್ ಟಿ–20 ಕ್ರಿಕೆಟ್ ಪಂದ್ಯಾವಳಿಯ ನಿರ್ಣಾಯಕ ಎಲಿಮಿನೇಟರ್ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಮತ್ತು ದೆಹಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ದೆಹಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಈ ಪಂದ್ಯದಲ್ಲಿ ಗೆದ್ದ ತಂಡವು ಇದೇ 5ರಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ನೇರವಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ.

*****************

ಭಾರತ–ತಾಂಜಾನಿಯಾ ಜಂಟಿ ರಕ್ಷಣಾ ಸಹಕಾರ ಸಮಿತಿಯ ನಾಲ್ಕನೇ ಆವೃತ್ತಿಯ ಸಭೆಯಲ್ಲಿ ಉಭಯ ದೇಶಗಳ ನಡುವೆ ಮಿಲಿಟರಿ ತರಬೇತಿ, ಕಡಲ ಭದ್ರತೆ ಮತ್ತು ರಕ್ಷಣಾ ಉದ್ಯಮ ಸಹಯೋಗದಲ್ಲಿ ಪರಸ್ಪರ ಸಹಕಾರ ಕುರಿತು ಚರ್ಚಿಸಲಾಯಿತು.

ತಾಂಜಾನಿಯಾದ ಝಾಂಜಿಬಾರ್‌ನಲ್ಲಿ ನಡೆದ ಎರಡು ದಿನಗಳ ಸಭೆಯಲ್ಲಿ ಅಂತಾರಾಷ್ಟ್ರೀಯ ಸಹಕಾರದ ಜಂಟಿ ಕಾರ್ಯದರ್ಶಿ ಅಮಿತಾಬ್ ಪ್ರಕಾಶ್ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ವಿಸ್ತರಿಸಲು ಹಾಗೂ ಭಯೋತ್ಪಾದನೆ ನಿಗ್ರಹ, ಶಾಂತಿ ಪಾಲನಾ ತರಬೇತಿ, ಎಲೆಕ್ಟ್ರಾನಿಕ್ ಯುದ್ಧ, ಸೈಬರ್, ಕೃತಕಬುದ್ಧಿಮತ್ತೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರದ ಕುರಿತು ಚರ್ಚಿಸಲಾಯಿತು.

*****************

ಆಸ್ಟ್ರೇಲಿಯಾದ ಮೆಲ್ಬರ್ನ್‌ನ ರೌವಿಲ್ಲೆಯಲ್ಲಿರುವ ಭಾರತೀಯ ಸಮುದಾಯ ಕೇಂದ್ರದಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆಯನ್ನು ಅಪರಿಚಿತ ವ್ಯಕ್ತಿಗಳು ಧ್ವಂಸಗೊಳಿಸಿರುವುದನ್ನು ಭಾರತ ತೀವ್ರವಾಗಿ ಖಂಡಿಸಿದೆ.

********ಮುಕ್ತಾಯ*********